# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** 2022-23ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-341ರಲ್ಲಿ ಘೋಷಿಸಿರುವ – ರಾಜ್ಯದ ಸಾ ರಕಗಳ ಸಂರಕ್ಷಣೆ ಹಾಗೂ ಅಭಿವೃದ್ಧಿಗಾಗಿ "Adopt a Monument" ಯೋಜನೆಯ ಅಂತಿಮ ಮಾರ್ಗಸೂಚಿಗಳಿಗೆ ಅನುಮೋದನೆ ನೀಡುವ ಕುರಿತು.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಟಿಒಆರ್ 31 ಟಿಡಿಎ 2022, ದಿನಾಂಕ: 08.04.2022.
2. ನಿರ್ದೇಶಕರು ಪ್ರವಾಸೋದ್ಯಮ ಇಲಾಖೆ, ಇವರ ಇ-ಕಛೇರಿ ಕಡತ ಸಂಖ್ಯೆ: 837630 File No. :DT-PLN3/25/2022
3. ನಿರ್ದೇಶಕರು, ಪ್ರವಾಸೋದ್ಯಮ ಇಲಾಖೆ, ಇವರ ಪತ್ರ ಸಂಖ್ಯೆ: DT PLN3/25/2022-DOT, ದಿನಾಂಕ: 08.08.2022.

**ಪ್ರಸ್ತಾವನೆ:**

ಮೇಲ ಕ್ರಮ ಸಂಖ್ಯೆ: (1)ರಲ್ಲಿ ಓದಲಾದ ಆದೇಶದಲ್ಲಿ, 2022-23ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-341ರಲ್ಲಿ ಮಾನ್ಯ ಮುಖ್ಯಮಂತ್ರಿಯವರು ಘೋಷಿಸಿರುವಂತೆ, ಪುರಾತತ್ವ, ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ ವತಿಯಿಂದ ರಾಜ್ಯದ ಸ್ಮಾರಕಗಳ ಸಂರಕ್ಷಣೆ ಹಾಗೂ ಅಭಿವೃದ್ಧಿಗಾಗಿ "Adopt a Monument" ಯೋಜನೆ ಮೂಲಕ ದತ್ತು ಪಡೆಯುವ ಯೋಜನೆಗೆ ಸರ್ಕಾರದ ತಾತ್ವಿಕ ಅನುಮೋದನೆ ನೀಡಲಾಗಿದೆ.

ಮೇಲ ಕ್ರಮ ಸಂಖ್ಯೆ: (2)ರಲ್ಲಿ ಓದಲಾದ ನಿರ್ದೇಶಕರು, ಪ್ರವಾಸೋದ್ಯಮ ಇಲಾಖೆ, ಇವರ ಏಕಕಡತದಲ್ಲಿ, ಮಾನ್ಯ ಮುಖ್ಯಮಂತ್ರಿಗಳು, ಕರ್ನಾಟಕ ಸರ್ಕಾರ ರವರು 2022-23 ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ 341 ರಲ್ಲಿ "ರಾಜ್ಯದ ಸ್ಮಾರಕಗಳ ಸಂರಕ್ಷಣೆ ಹಾಗೂ ಅಭಿವೃದ್ಧಿಗಾಗಿ "Adopt a Monument" ಯೋಜನೆ ಮೂಲಕ ದತ್ತು ಪಡೆಯಲು ಅವಕಾಶ ಕಲ್ಪಿಸಲಾಗುವುದು" ಎಂಬುದಾಗಿ ಘೋಷಿಸಿರುತ್ತಾರೆ.

ಸರ್ಕಾರದ ಆದೇಶ ಸಂಖ್ಯೆ: ಟಿಒಆರ್/31/ಟಿಡಿಎ/2022, ದಿನಾಂಕ: 08.04.2022 ರನ್ವಯ ಸದರಿ ಯೋಜನೆಯನ್ನು ಪುರಾತತ್ವ ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ ವತಿಯಿಂದ ಅನುಷ್ಠಾನಗೊಳಿಸಲು ಹಾಗೂ ಸದರಿ ಯೋಜನೆಯ ಮಾರ್ಗಸೂಚಿ ಮತ್ತು Memorandum of understanding ಮಾದರಿಯನ್ನು ಹೊರಡಿಸಿ ಆಸಕ್ತ ಸಂಘ/ ಸಂಸ್ಥೆಗಳಿಂದ Expression of Interest ಕರೆಯುವ ಮೂಲಕ ಆಯುಕ್ತರು, ಪುರಾತತ್ವ ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ, ಮೈಸೂರು ಯೋಜನೆಯನ್ನು Empowered Committee for monument Adoption and Monument Committee ಗಳ ಅನುಮೋದನೆಯೊಂದಿಗೆ ಅನುಷ್ಠಾನಗೊಳಿಸಲು ಸರ್ಕಾರದ ತಾತ್ವಿಕ ಅನುಮೋದನೆ ನೀಡಲಾಗಿದೆ.

ದಿನಾಂಕ: 22.07.2022 ರಂದು ಮಾನ್ಯ ಸರ್ಕಾರದ ಕಾರ್ಯದರ್ಶಿಗಳು, ಪ್ರವಾಸೋದ್ಯಮ ಇಲಾಖೆ ರವರ ಅಧ್ಯಕ್ಷತೆಯಲ್ಲಿ ನಡೆದ 2022-23 ನೇ ಸಾಲಿನ ಆಯವ್ಯಯ ಘೋಷಣೆಗಳ ಅನುಷ್ಠಾನಕ್ಕಾಗಿ ಕೈಗೊಂಡ ಕ್ರಮಗಳ ಸಭೆಯಲ್ಲಿ "Adopt a Monument" ಯೋಜನೆಯನ್ನು ಅನುಷ್ಠಾನಗೊಳಿಸುವ ಸಂಬಂಧ ಮಾರ್ಗಸೂಚಿಗಳನ್ನು ವಿವರಿಸಿ, ಪ್ರಾತ್ಯಕ್ಷಿಕೆಯನ್ನು ಪ್ರಸ್ತುತ ಪಡಿಸಲಾಗಿದ್ದು, ಮೌಖಿಕವಾಗಿ ಅನುಮೋದನೆಯನ್ನು ನೀಡಿದ್ದು, ಸದರಿ ಯೋಜನೆಯ ಮಾರ್ಗಸೂಚಿ ಹಾಗೂ ಯೋಜನೆಯ ಅನುಷ್ಠಾನಕ್ಕಾಗಿ ಸರ್ಕಾರದ ಕಾರ್ಯದರ್ಶಿಗಳ ಅನುಮೋದನೆಗಾಗಿ ಕಡತದಲ್ಲಿ ಮಾರ್ಗಸೂಚಿಯನ್ನು ಅಡಕವಿರಿಸಿ ಅನುಮೋದನೆಗೆ ಸಲ್ಲಿಸಿರುತ್ತಾರೆ.

ಮೇಲೆ ಕ್ರಮ ಸಂಖ್ಯೆ: (3)ರಲ್ಲಿ ಓದಲಾದ ಪತ್ರದಲ್ಲಿ, ಸರ್ಕಾರದ ಆದೇಶ ಸಂಖ್ಯೆ: ಪ್ರಇ 98 ಪ್ರವಾಯೋ 2014, ದಿ: 16.09.2014ರಲ್ಲಿ ಕಾರ್ಪೊರೇಟ್ ಸಾಮಾಜಿಕ ಸಹಭಾಗಿತ್ವದಲ್ಲಿ "ಪ್ರವಾಸಿ ತಾಣಗಳು/ಸರ್ಕ್ಯೂಟ್ಸ್ ದತ್ತು ತೆಗೆದುಕೊಳ್ಳುವ ಕಾರ್ಯಕ್ರಮ" ವನ್ನು ಪ್ರಾರಂಭಿಸಲು ಮಂಜೂರಾತಿ ನೀಡಲಾಗಿರುತ್ತದೆ. ಆದ್ದರಿಂದ, ಸದರಿ ಆದೇಶವನ್ನು ಹಿಂಪಡೆದು, 2022-23ನೇ ಸಾಲಿನ ಆಯವ್ಯಯದ ಕಂಡಿಕೆ-334ರ ಘೋಷಣೆಯಂತೆ "Adopt a Monument" ಯೋಜನೆಯನ್ನು ಅನುಷ್ಠಾನಗೊಳಿಸುವ ಸಂಬಂಧ ಸಲ್ಲಿಸಿರುವ ಮಾರ್ಗಸೂಚಿಗಳಿಗೆ ಅನುಮೋದನೆ ನೀಡಿ ಆದೇಶ ಹೊರಡಿಸುವಂತೆ ಕೋರಿರುತ್ತಾರೆ.

ನಿರ್ದೇಶಕರವರ ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಟಿಓಆರ್ 31 ಟಿಡಿಎ 2022**
**ಬೆಂಗಳೂರು ದಿನಾಂಕ: 18-08-2022**

1. ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಸರ್ಕಾರದ ಆದೇಶ ಸಂಖ್ಯೆ: ಪ್ರಇ 98 ಪ್ರವಾಯೋ 2014, ದಿ: 16.09.2014ರಲ್ಲಿ ಕಾರ್ಪೊರೇಟ್ ಸಾಮಾಜಿಕ ಸಹಭಾಗಿತ್ವದಲ್ಲಿ "ಪ್ರವಾಸಿ ತಾಣಗಳು/ಸರ್ಕ್ಯೂಟ್ಸ್ ದತ್ತು ತೆಗೆದುಕೊಳ್ಳುವ ಕಾರ್ಯಕ್ರಮ" ವನ್ನು ಪ್ರಾರಂಭಿಸಲು ನೀಡಿರುವ ಮಂಜೂರಾತಿಯನ್ನು ಹಿಂಪಡೆದು, ಸರ್ಕಾರದ ಆದೇಶ ಸಂಖ್ಯೆ: ಟಿಓಆರ್ 31 ಟಿಡಿಎ 2022, ದಿನಾಂಕ:08.04.2022ರಲ್ಲಿ 2022-23ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-334ನ್ನು ಅನುಷ್ಠಾನಗೊಳಿಸುವ ಸಂಬಂಧ ನೀಡಲಾದ ತಾತ್ವಿಕ ಅನುಮೋದನೆಯಂತೆ ಈ ಆದೇಶಕ್ಕೆ ಲಗತ್ತಿಸಿರುವ "ರಾಜ್ಯದ ಸ್ಮಾರಕಗಳ ಸಂರಕ್ಷಣೆ ಹಾಗೂ ಅಭಿವೃದ್ಧಿಗಾಗಿ 'Adopt a Monument' ಯೋಜನೆ"ಯ ಅಂತಿಮ ಮಾರ್ಗಸೂಚಿಗಳಿಗೆ ಸರ್ಕಾರದ ಅನುಮೋದನೆ ನೀಡಲಾಗಿದೆ.

2 . ಈ ಆದೇಶವನ್ನು ಸರ್ಕಾರದ ಆದೇಶ ಸಂಖ್ಯೆ: ಆಇ 01 ಟಿ ಎಫ್ ಪಿ 2022, ದಿನಾಂಕ:04-04-2022 ರಲ್ಲಿ ಸರ್ಕಾರದ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಿರುವ ಅಧಿಕಾರದನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

B. Vimala 18/08/2022

**(ವಿಮಲಾಕ್ಷಿ ಬಿ.)**
ಸರ್ಕಾರದ ಅಧೀನ ಕಾರ್ಯದರ್ಶಿ
ಪ್ರವಾಸೋದ್ಯಮ ಇಲಾಖೆ

**ಇವರಿಗೆ:**

1. ಮಹಾಲೇಖಪಾಲರು(ಲೆಕ್ಕಪತ್ರ/ಲೆಕ್ಕಪರಿಶೋಧನೆ), ಕರ್ನಾಟಕ, ಬೆಂಗಳೂರು
2. ನಿರ್ದೇಶಕರು, ಪ್ರವಾಸೋದ್ಯಮ ಇಲಾಖೆ, ಎಂಬಸ್ಸಿ ಐಕಾನ್ ಕಟ್ಟಡ, ಇನ್ಫೆಂಟ್ರಿ ರಸ್ತೆ, ಬೆಂಗಳೂರು.
3. ಆಯುಕ್ತರು, ಪುರಾತತ್ವ, ಸಂಗ್ರಹಾಲಯಗಳು ಮತ್ತು ಪರಂಪರೆ ಇಲಾಖೆ, ಮೈಸೂರು.
4. ನಿರ್ದೇಶಕರು ಜನಶಕ್ತಿ ಮತ್ತು ಉದ್ಯೋಗ ವಿಭಾಗ, ಯೋಜನಾ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
5. ಜಂಟಿ ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಕೆ.ಆರ್.ವೃತ್ತ, ಬೆಂಗಳೂರು-1.
6. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ 7/8), ವಿಧಾನಸೌಧ.
7. ಶಾಖಾರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

**ಪ್ರತಿ:**

1. ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ, ಪ್ರವಾಸೋದ್ಯಮ ಇಲಾಖೆ.
2. ಸರ್ಕಾರದ ಉಪ ಕಾರ್ಯದರ್ಶಿಯವರ ಆಪ್ತ ಸಹಾಯಕರು, ಪ್ರವಾಸೋದ್ಯಮ ಇಲಾಖೆ.

*****